All India Radio: Bangalore
National Bulletin In Kannada
29.11.2025  19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಸೋಮವಾರದಿಂದ ಸಂಸತ್ತಿನ ಚಳಿಗಾಲದ ಅಧಿವೇಶನ; ನಾಳೆ ಸರ್ವಪಕ್ಷ ಸಭೆ ಕರೆದ ಸರ್ಕಾರ
- ಛತ್ತೀಸ್‌ಗಢದಲ್ಲಿ ೧೦ನೇ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರ, ಮಹಾ ನಿರೀಕ್ಷಕರ ಸಮ್ಮೇಳನ; ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆ
- ಸಾರಸ್ ಎಂಕೆ-೨ ನಾಗರಿಕ ಸಾರಿಗೆ ವಿಮಾನ ಆತ್ಮನಿರ್ಭರ ಭಾರತದತ್ತ ದೃಢ ಹೆಜ್ಜೆ - ಕೇಂದ್ರ ಸಚಿವ ಜಿತೇಂದ್ರ ಸಿಂಗ್
- ನಾಳೆ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್; ದೇಶ-ವಿದೇಶಗಳ ಭಾರತೀಯರನ್ನುದ್ದೇಶಿಸಿ ಪ್ರಧಾನಿ ಮನದ ಮಾತು

***************

ಸೋಮವಾರದಿಂದ ಆರಂಭವಾಗಲಿರುವ ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೆ ಮುನ್ನ ಸರ್ಕಾರ ನಾಳೆ ಸರ್ವಪಕ್ಷ ಸಭೆ ಕರೆದಿದೆ. ಈ ಸಭೆಯಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಂಸತ್ತಿನ ಎರಡೂ ಸದನಗಳ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಅಧಿವೇಶನದ ಸಮಯದಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳಿಂದ ಸಹಕಾರವನ್ನು ಕೋರಲಿದೆ. ಸೋಮವಾರದಿಂದ ಪ್ರಾರಂಭವಾಗಲಿರುವ ಚಳಿಗಾಲದ ಅಧಿವೇಶನವು ಡಿಸೆಂಬರ್ ೧೯ ರವರೆಗೆ ಮುಂದುವರಿಯಲಿದೆ.

***************

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ೬೦ನೇ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾನಿರೀಕ್ಷಕರ ಸಮ್ಮೇಳನದ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಿದ್ದಾರೆ.

ಮೂರು ದಿನಗಳ ಈ ಸಮ್ಮೇಳನ ನಿನ್ನೆ ನವ ರಾಯ್‌ಪುರದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ಪ್ರಾರಂಭವಾಯಿತು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮ್ಮೇಳನವನ್ನು ಉದ್ಘಾಟಿಸಿದರು. ಆಂತರಿಕ ಭದ್ರತೆಗೆ ಪರಿಹಾರಗಳ ವೇದಿಕೆಯಾಗಿ ಸಮ್ಮೇಳನವನ್ನು ರೂಪಿಸಲಾಗಿದೆ, ಕಾರ್ಯತಂತ್ರ ರೂಪಿಸುವುದು ಮತ್ತು ನೀತಿ ನಿರೂಪಣೆಗೆ ವಿಶಾಲ ತತ್ವಗಳನ್ನು ರೂಪಿಸಲಾಗಿದೆ ಎಂದು ಅವರು ಹೇಳಿದರು.

ಕಳೆದ ೧೧ ವರ್ಷಗಳಲ್ಲಿ ಉಗ್ರವಾದ, ದಂಗೆ ಮತ್ತು ಮಾದಕ ದ್ರವ್ಯಗಳ ವಿರುದ್ಧದ ಕಾರ್ಯಾಚರಣೆಗಳಲ್ಲಿ ದೇಶ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಶಾ ಹೇಳಿದರು.

***************

ಸಾರಸ್ ಎಂಕೆ-೨ ಭಾರತದ ಮೊದಲ ಸ್ವದೇಶಿ ವಿನ್ಯಾಸದ ನಾಗರಿಕ ಸಾರಿಗೆ ವಿಮಾನವಾಗಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮನಿರ್ಭರ ಭಾರತದ ಕನಸಿಗೆ ಇದು ಮತ್ತೊಂದು ದೃಢ ಹೆಜ್ಜೆಯಾಗಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಹೇಳಿದರು.

ಅವರು, ಬೆಂಗಳೂರಿನ ಸಿಎಸ್ಐಆರ್-ಎನ್ಎಎಲ್ ನಲ್ಲಿ ದೇಶದ ಮೊದಲ ದೇಶೀಯ ಸಾರಸ್ ಎಂಕೆ-೨ ಐರನ್ ಬರ್ಡ್ ಪರೀಕ್ಷಾ ಸೌಲಭ್ಯವನ್ನು ಇಂದು ಉದ್ಘಾಟಿಸಿ ಮಾತನಾಡುತ್ತಾ, ದೇಶದಲ್ಲಿ ವಿಮಾನಯಾನ ಕ್ಷೇತ್ರವು ತೀವ್ರಗತಿಯಲ್ಲಿ ಬೆಳೆಯುತ್ತಿದ್ದು, ಕೆಳ ಮಧ್ಯಮ ವರ್ಗದ ಜನರು ವಿಮಾನದಲ್ಲಿ ಪ್ರಯಾಣಿಸಬೇಕೆಂಬುದು ಪ್ರಧಾನಿ ನರೇಂದ್ರ ಮೋದಿ ಅವರ ಕನಸಾಗಿದೆ ಎಂದು ಹೇಳಿದರು.

೧೯ ಆಸನ ಸಾಮರ್ಥ್ಯದ ಲಘು ಸಾರಿಗೆ ವಿಮಾನ ವರ್ಗದ ಸಾರಸ್ ಎಂಕೆ-೨ ವಿಮಾನದ ಅಭಿವೃದ್ಧಿಗೆ ಈ ಸೌಲಭ್ಯ ನಿರ್ಣಾಯಕ ಪಾತ್ರ ವಹಿಸಲಿದೆ. ಇದೇ ವೇಳೆ ಅವರು, ಎಚ್ಎಪಿ ಏರ್‌ಫ್ರೇಮ್ ಫ್ಯಾಬ್ರಿಕೇಷನ್ ಸೌಲಭ್ಯ ಹಾಗೂ ಹಂಸ-೩ ವಿಮಾನವನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ನಾಗ್ಪುರದ ಸೋಲಾರ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಲಿಮಿಟೆಡ್ ಹಾಗೂ ಸಿಎಸ್ಐಆರ್-ಎನ್ಎಎಲ್ ನಡುವೆ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.

***************

ಭಾರತವು ಪ್ರಸ್ತುತ ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿರುವ ವೇಗವನ್ನು ಪರಿಗಣಿಸಿ, ಯುವಕರು ಕ್ರಿಯಾಶೀಲರಾಗಿರುವುದು ಅಗತ್ಯ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಉತ್ತರಾಖಂಡದ ಮಸ್ಸೂರಿಯಲ್ಲಿರುವ ಲಾಲ್ ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಆಡಳಿತ ಅಕಾಡೆಮಿಯಲ್ಲಿ ಇಂದು ನಡೆದ ೧೦೦ನೇ ಫೌಂಡೇಶನ್ ಕೋರ್ಸ್‌ನ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು, ಸಮಾಜದ ಪ್ರತಿಯೊಂದು ವರ್ಗವು ಈ ಅಭಿವೃದ್ಧಿಯ ಪ್ರಯಾಣದಲ್ಲಿ ಸಮಾನವಾಗಿ ಭಾಗವಹಿಸುವುದನ್ನು ನಾವು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

ಅಭಿವೃದ್ಧಿ ಹೊಂದಿದ ಭಾರತದ ಗುರಿ ಸಾಕಾರಗೊಳ್ಳುವ ೨೦೪೭ ರ ವೇಳೆಗೆ, ದೇಶದ ಅನೇಕ ಮಹಿಳೆಯರು ಸಂಪುಟ ಸಭೆಯ ಕಾರ್ಯದರ್ಶಿ ಸ್ಥಾನವನ್ನು ತಲುಪುತ್ತಾರೆ. ಭಾರತದ ಮಹಿಳಾ ಶಕ್ತಿಯು ರಾಷ್ಟ್ರದ ಅಭಿವೃದ್ಧಿ ಪ್ರಯಾಣಕ್ಕೆ ಕೊಡುಗೆ ನೀಡಲು ಸಂಪೂರ್ಣವಾಗಿ ಸಿದ್ಧವಾಗಿದೆ ಮತ್ತು ಅವಕಾಶ ನೀಡಿದಾಗ ಅವರು ಸಾಧಿಸಲು ಸಾಧ್ಯವಾಗದ ಯಾವುದೇ ಸ್ಥಾನವಿಲ್ಲ ಎಂದು ತೋರಿಸುತ್ತದೆ ಎಂದು ಅವರು ಹೇಳಿದರು.

***************

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಿಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್‌ನ ೧೨೭ ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.

ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

***************

ವಡೋದರಾದಲ್ಲಿ ಇಂದು ನಡೆದ 'ಸರ್ದಾರ್ @೧೫೦ ಏಕತಾ ನಡಿಗೆ ಭಾಗವಾಗಿ ಸರ್ದಾರ್ ಗಾಥಾವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವ ಜೆ.ಪಿ. ನಡ್ಡಾ, ವಲ್ಲಭಭಾಯಿ ಪಟೇಲ್ ಅವರಿಗೆ ಗೌರವ ಸಲ್ಲಿಸಿದರು.

ಇಂದು ಕಾಣುವ ಭಾರತವು ಪಟೇಲ್ ಅವರ ರಾಷ್ಟ್ರ ನಿರ್ಮಾಣ ಪ್ರಯತ್ನಗಳ ಫಲವಾಗಿದೆ. ಅವರು "ಆಧುನಿಕ ಭಾರತದ ಶಿಲ್ಪಿ". ಅವರನ್ನು ರಾಷ್ಟ್ರೀಯ ಅಸ್ಮಿತೆಯಾಗಿ ಸ್ಮರಿಸಲಾಗುತ್ತಿದೆ, ದೇಶವನ್ನು 'ಒಗ್ಗೂಡಿಸಿರುವುದು ಅವರ ಶ್ರೇಷ್ಠ ಕೊಡುಗೆ ಎಂದು ನಡ್ಡಾ ಹೇಳಿದರು.

ಪಟೇಲ್ ಅಹಮದಾಬಾದ್‌ನಲ್ಲಿ ಯಶಸ್ವಿ ವಕೀಲರಾಗಿದ್ದರೂ, ಮಹಾತ್ಮ ಗಾಂಧಿಯವರ ಕರೆಯ ಮೇರೆಗೆ ಆರಾಮದಾಯಕ ಜೀವನವನ್ನು ತ್ಯಜಿಸಿದ್ದನ್ನು ನೆನಪಿಸಿಕೊಂಡ ಅವರು ಪಟೇಲರ ಇಡೀ ಜೀವನ ಸಾರ್ವಜನಿಕ ಕಲ್ಯಾಣಕ್ಕಾಗಿ ಮೀಸಲಾಗಿತ್ತು ಎಂದು ಅವರು ಹೇಳಿದರು.

***************

ಇಂಡೋನೇಷ್ಯಾದ ಅಚೆ, ಉತ್ತರ ಸುಮಾತ್ರ ಮತ್ತು ಪಶ್ಚಿಮ ಸುಮಾತ್ರಗಳಲ್ಲಿ ಸುನಾಮಿ, ಭೂಕಂಪ ಮತ್ತು ತೀವ್ರ ಪ್ರವಾಹದಿಂದ ಸಾವನ್ನಪ್ಪಿದವರ ಸಂಖ್ಯೆ ೨೪೮ಕ್ಕೆ ಏರಿದ್ದು, ೧೦೦ಕ್ಕೂ ಹೆಚ್ಚು ಜನರು ಕಾಣೆಯಾಗಿದ್ದಾರೆ.

ಹಾನಿಗೊಳಗಾದ ರಸ್ತೆಗಳು ಮತ್ತು ಅಸ್ತವ್ಯಸ್ತಗೊಂಡ ಸಂವಹನ ವ್ಯವಸ್ಥೆ ರಕ್ಷಣಾ ಕಾರ್ಯಕರ್ತರು ತೊಂದರೆಗೊಳಗಾದ ಪ್ರದೇಶಗಳನ್ನು ತಲುಪಲು ಪರದಾಡಬೇಕಾಯಿತು. ಕುಸಿದ ಸೇತುವೆಗಳು ಮತ್ತು ಭಾರೀ ಉಪಕರಣಗಳ ಕೊರತೆಯಿಂದಾಗಿ ರಕ್ಷಣಾ ಕಾರ್ಯಾಚರಣೆಗಳಿಗೆ ಅಡ್ಡಿಯಾಗುತ್ತಿದೆ.

ಕಳೆದ ವಾರದಿಂದ ನಿರಂತರವಾಗಿ ಸುರಿಯುತ್ತಿರುವ ಮುಂಗಾರು ಮಳೆಯಿಂದಾಗಿ ಉತ್ತರ ಸುಮಾತ್ರದಲ್ಲಿ ನದಿಗಳು ಉಕ್ಕಿ ಹರಿಯುತ್ತಿದ್ದು, ಪರ್ವತದ ಪ್ರದೇಶಗಳಲ್ಲಿ ಪ್ರವಾಹ ಉಂಟಾಗಿ ಸಾವಿರಾರು ಮನೆಗಳು ಮತ್ತು ಕಟ್ಟಡಗಳು ಮುಳುಗಿವೆ.

***************

ಪ್ರಧಾನ ಮಂತ್ರಿಗಳ ವಸ್ತುಸಂಗ್ರಹಾಲಯ ಮತ್ತು ಗ್ರಂಥಾಲಯ-ಪಿಎಂಎಂಎಲ್ ಪ್ರಪಂಚದಾದ್ಯಂತ ಸಂಶೋಧಕರಿಗೆ ಅಪರೂಪದ ಆರ್ಕೈವಲ್ ಸಂಗ್ರಹಕ್ಕೆ ದೂರನಿಯಂತ್ರಿತ ಪ್ರವೇಶವನ್ನು ಸಕ್ರಿಯಗೊಳಿಸಿದೆ.

ಡಿಜಿಟಲ್ ಆರ್ಕೈವ್‌ಗಳಿಗೆ ಪ್ರವೇಶವನ್ನು ಸುಲಭಗೊಳಿಸಲು ಒಂದು ಐಟಿ ಪ್ಲಾಟ್‌ಫಾರ್ಮ್ ಅನ್ನು ರಚಿಸಲಾಗಿದ್ದು, ಇದರ ಮೂಲಕ ನೋಂದಾಯಿತ ಸಂಶೋಧಕರು ಈಗ ಪಿಎಂಎಂಎಲ್ ಆವರಣಕ್ಕೆ ಭೇಟಿ ನೀಡದೆಯೇ ನಿರ್ದಿಷ್ಟ ಆರ್ಕೈವಲ್ ದಾಖಲೆಗಳನ್ನು ವೀಕ್ಷಿಸಲು ಆನ್‌ಲೈನ್ ವಿನಂತಿಗಳನ್ನು ಸಲ್ಲಿಸಬಹುದು.

***************

ಮಲೇಷ್ಯಾದ ಇಪೋದಲ್ಲಿರುವ ಸುಲ್ತಾನ್ ಅಜ್ಲಾನ್ ಶಾ ಕ್ರೀಡಾಂಗಣದಲ್ಲಿ ನಡೆದ ಹಾಕಿ ಪಂದ್ಯದಲ್ಲಿ ಭಾರತ ತಂಡ ಕೆನಡಾ ವಿರುದ್ಧ ೧೪-೩ ಅಂತರದ ಭರ್ಜರಿ ಗೆಲುವು ಸಾಧಿಸಿ ಅದ್ಭುತ ಪ್ರದರ್ಶನ ನೀಡಿತು. ಈ ಗೆಲುವಿನೊಂದಿಗೆ ಭಾರತ ಫೈನಲ್‌ಗೆ ಪ್ರವೇಶಿಸಿದೆ.

*******ಮುಕ್ತಾಯ*******